ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ : ಕಾಶಿಇ/ಶೈವಿ/27/ಅಕಾನಿ-ಮಂಜೂರು/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001,
ದಿನಾಂಕ : 16.05.2022.

## ಅಧಿಕೃತ ಜ್ಞಾಪನ

**ವಿಷಯ :** ವಿಶೇಷ ಅನ್ಯಕಾರ್ಯನಿಮಿತ್ತ ಮಂಜೂರು ಮಾಡುವ ಬಗ್ಗೆ

**ಉಲ್ಲೇಖ :** ಅಧ್ಯಕ್ಷರು, ಕುವೆಂಪು ಭಾಷಾ ಭಾರತಿ ಪ್ರಾಧಿಕಾರ, ಬೆಂಗಳೂರು ಇವರ ಪತ್ರಸಂಖ್ಯೆ: ಕುಭಾಪ್ರಾ/ಕಿರುಅವಧಿ/2022-23, ದಿನಾಂಕ:09.05.2022.

******

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕುವೆಂಪು ಭಾಷಾ ಭಾರತಿ ಪ್ರಾಧಿಕಾರ, ಕಲಾಗ್ರಾಮ, ಮಲ್ಲತ್ತಹಳ್ಳಿ, ಜ್ಞಾನಭಾರತಿ ಅಂಚೆ, ಬೆಂಗಳೂರು ಇವರ ವತಿಯಿಂದ ಕಾಲೇಜುಗಳ ಸಹ/ಸಹಾಯಕ ಪ್ರಾಧ್ಯಾಪಕರುಗಳಿಗೆ ಮೊದಲ ಕಿರುಅವಧಿ ಭಾಷಾಂತರ ಕೋರ್ಸುಗಳನ್ನು ದಿನಾಂಕ : 13.06.2022 ರಿಂದ 19.06.2022 ರವರೆಗೆ ಆಯೋಜಿಸಲಾಗಿದ್ದು, ವಿವಿಧ ಭಾಷಾ ವಿಷಯಗಳನ್ನು ಬೋಧಿಸುವ ಬೋಧಕರುಗಳಿಗಾಗಿ ರೂಪಿಸಲಾಗಿದೆ, ಭಾಗವಹಿಸುವ ಅಧ್ಯಾಪಕರುಗಳಿಗೆ ಪ್ರಯಾಣ ವೆಚ್ಚ ಹಾಗೂ ಉಚಿತ ಊಟ, ವಸತಿಯ ವ್ಯವಸ್ಥೆಯನ್ನು ಪ್ರಾಧಿಕಾರವೇ ಮಾಡಲಾಗುವುದು ಆದ್ದರಿಂದ ಸದರಿ ಕೋರ್ಸುಗಳಿಗೆ ಅಧ್ಯಾಪಕರುಗಳನ್ನು ನಿಯೋಜಿಸಿ ಭಾಗವಹಿಸುವವರಿಗೆ ಅನ್ಯಕಾರ್ಯನಿಮಿತ್ತ ರಜೆ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಈ ಸಂಬಂಧ, ಇಲಾಖಾ ವ್ಯಾಪ್ತಿಯ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಬಾಷಾ ವಿಷಯವನ್ನು ಬೋಧಿಸುವ ಆಸಕ್ತ ಅಧ್ಯಾಪಕರುಗಳು ಸದರಿ ಕೋರ್ಸ್‌ನಲ್ಲಿ ಭಾಗವಹಿಸಲು ಅರ್ಜಿ ಸಲ್ಲಿಸಲು ವಿವರಗಳಿಗಾಗಿ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಈ-ಮೇಲ್ ವಿಳಾಸ : kbbp-bengaluru@ka.gov.in ಹಾಗೂ ದೂರವಾಣಿ ಸಂಖ್ಯೆ : 080-23183311/23183312 ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದಾಗಿದೆ.

ಕಿರುಅವಧಿ ಭಾಷಾಂತರ ಕೋರ್ಸ್‌ಗೆ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದಿಂದ ಆಯ್ಕೆಗೊಂಡ ಅಧ್ಯಾಪಕರುಗಳಿಗೆ ದಿನಾಂಕ : 13.06.2022 ರಿಂದ 19.06.2022 ರವರೆಗೆ ಭಾಗವಹಿಸಲು ಅನುಮತಿ ನೀಡಲಾಗಿದೆ. ಹಾಗೂ ಸದರಿ ಕೋರ್ಸ್‌ನಲ್ಲಿ ಭಾಗವಹಿಸಿದ ಬಗ್ಗೆ ಮೇಲಾಧಿಕಾರಿಗಳಿಗೆ ಹಾಜರಾತಿ ಪ್ರಮಾಣ ಪತ್ರವನ್ನು ಒಪ್ಪಿಸುವ ನಿಬಂಧನೆಗೊಳಪಟ್ಟು ಸರ್ಕಾರದ/ಇಲಾಖೆಯ ವತಿಯಿಂದ ಯಾವುದೇ ಭತ್ಯೆಗಳಿಲ್ಲದೆ ವಿಶೇಷ ಅನ್ಯಕಾರ್ಯ ನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ :

01. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ – ಇವರಿಗೆ ಮಾಹಿತಿಗಾಗಿ.
02. ಅಧ್ಯಕ್ಷರು, ಕುವೆಂಪು ಭಾಷಾ ಭಾರತಿ ಪ್ರಾಧಿಕಾರ, ಕಲಾಗ್ರಾಮ, ಮಲ್ಲತ್ತಳ್ಳಿ, ಜ್ಞಾನಭಾರತಿ ಅಂಚೆ, ಬೆಂಗಳೂರು - 560056.
03. ಕಛೇರಿ ಪ್ರತಿ.
04. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.